ಕರ್ನಾಟಕ ಸರ್ಕಾರ


# ಜಿಲ್ಲಾಧಿಕಾರಿಯವರ ಕಛೇರಿ, ರಜತಾದ್ರಿ, ಮಣಿಪಾಲ, ಉಡುಪಿ ಜಿಲ್ಲೆ – 576104

*Phone: 0820 -2574925(O), 2574926(F), E-Mail: deo.udupi@gmail.com Website: www.udupi.nic.in*


ನಂ: ವಿಎಎಸ್ ಸಿಆರ್ 54 /2015-16 ದಿನಾಂಕ : 1.8.2015

## ಅಧಿಸೂಚನೆ

ವಿಷಯ: 2015 ನೇ ಸಾಲಿನಲ್ಲಿ ಉಡುಪಿ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಕರಣಿಕ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು.

ಉಲ್ಲೇಖ:-1:-ಸರ್ಕಾರದ ಆಧಿಸೂಚನೆ ಸಂ ಕಂಇ 299 ಬಿಎಸ್ ಸಿ 2006 ದಿನಾಂಕ 24/07/2009

2. ಸರ್ಕಾರದ ಅಧಿಸೂಚನೆ ಸಂ ಕಂಇ04 ಬಿಎಸ್ ಸಿ 2011 ದಿನಾಂಕ 25/02/2011

3. ಸರ್ಕಾರದ ಅಧಿಸೂಚನೆ ಸಂಖ್ಯೆ ಕಂಇ 100 ಬಿಎಸ್ ಸಿ 2011 ದಿನಾಂಕ: 29.6.2012

*****

ಉಡುಪಿ ಜಿಲ್ಲಾ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ Online ಮುಖಾಂತರ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು ಇಲಾಖೆಯ ಅಧಿಕೃತ ವೆಬ್ ಸೈಟ್ ವಿಳಾಸ http://udupi.nic.in ನಲ್ಲಿ ಅಳವಡಿಸಲಾಗಿದೆ. ಅರ್ಜಿಗಳು ದಿನಾಂಕ 17.08.2015 ರಿಂದ ಸದರಿ ವೆಬ್ ಸೈಟ್ ನಲ್ಲಿ ಚಾಲನೆಯಲ್ಲಿರುತ್ತದೆ. ಅರ್ಜಿಗಳನ್ನು ಆನ್ ಲೈನ್ ಮುಖಾಂತರ ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ. ಅರ್ಜಿಗಳನ್ನು ದಿನಾಂಕ: 15.9.2015 ರೊಳಗೆ ಸಲ್ಲಿಸತಕ್ಕದ್ದು .

| ಕ್ರ ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ | ಶೈಕ್ಷಣಿಕ ವಿದ್ಯಾರ್ಹತೆ | ವೇತನ ಶ್ರೇಣಿ |
|---|---|---|---|---|
| 1 | ಗ್ರಾಮ ಲೆಕ್ಕಿಗ | 15 | 1. ದ್ವಿತೀಯ ಪಿ.ಯು.ಸಿ. ಅಥವಾ 12ನೇ ತರಗತಿ (12th Standard Examination conducted by Central board of Secondary Education or ICSE) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.<br><br>ಈ ಮೇಲ್ಕಂಡ ವಿದ್ಯಾರ್ಹತೆಯನ್ನು ಹೊರತು ಪಡಿಸಿ JOC, Diploma ಇನ್ನಿತರ ಯಾವುದೇ ವಿದ್ಯಾರ್ಹತೆಗಳನ್ನು ಈ ಹುದ್ದೆಗಳಿಗೆ ಪರಿಗಣಿಸಲಾಗುವುದಿಲ್ಲ.<br>2.. ಕಂಪ್ಯೂಟರ್ ಜ್ಞಾನವುಳ್ಳವರಾಗಿರಬೇಕು | 11600-21000 |

| ಮೀಸಲಾತಿ ವರ್ಗೀಕರಣ ( ರೋಸ್ಟರ್ ಬಿಂದು 06 ರಿಂದ 20 ರವರೆಗೆ) | | | | | | | | | |
|---|---|---|---|---|---|---|---|---|---|
| ಕ್ರ.ಸ. | ವರ್ಗೀಕರಣದ ವಿವರ | ಇತರ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲರು | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತರು | ಒಟ್ಟು |
| 1 | ಪರಿಶಿಷ್ಟ ಜಾತಿ | 0 | 1 | 1 | 0 | 0 | 0 | 0 | **2** |
| 2 | ಪ.ಪಂ | 0 | 0 | 0 | 0 | 0 | 0 | 0 | **0** |
| 3 | ಪ್ರವರ್ಗ-1 | 0 | 0 | 0 | 0 | 0 | 0 | 0 | **0** |
| 4 | ಪ್ರವರ್ಗ-2ಎ | 1 | 1 | 0 | 0 | 0 | 0 | 0 | **2** |
| 5 | ಪ್ರವರ್ಗ-2ಬಿ | 0 | 0 | 1 | 0 | 0 | 0 | 0 | **1** |
| 6 | ಪ್ರವರ್ಗ-3ಎ | 0 | 0 | 1 | 0 | 0 | 0 | 0 | **1** |
| 7 | ಪ್ರವರ್ಗ-3ಬಿ | 1 | 0 | 0 | 0 | 0 | 0 | 0 | **1** |
| 8 | ಸಾಮಾನ್ಯ ಅರ್ಹತೆ | 1 | 2 | 3 | 1 | 1 | 0 | 0 | **8** |
| | **ಜುಮ್ಲಾ** | **3** | **4** | **6** | **1** | **1** | **0** | **0** | **15** |

ಷರಾ ಸರಕಾರದ ಆದೇಶ ಸಂ: ಸಿಆಸು ಇ 128 ಸೆನೆನಿ 2006 ದಿನಾಂಕ: 1.8.2009 ರಂತೆ 4 ಮತ್ತು 24ನೇ ಬಿಂದುಗಳನ್ನು ದೃಷ್ಟಿ ಮಾಂದ್ಯತೆ ಹೊಂದಿದ ಅಭ್ಯರ್ಥಿಗಳಿಗೆ ಮೀಸಲಿರಿಸಬೇಕಾಗಿರುತ್ತದೆ. ಪ್ರಸ್ತುತ ಗ್ರಾಮಕರಣಿಕ ನೇಮಕಾತಿಯಲ್ಲಿ ಸಾಮಾನ್ಯ ವರ್ಗದಡಿ ಅಂಗವಿಕಲತೆ ಬಿಂದು 4 ಆಗಿರುತ್ತದೆ. ಆದರೆ ಸರಕಾರದ ಆದೇಶ ಸಂ: ಡಿಪಿಎಆರ್ 54 ಎಸ್ ಆರ್ ಆರ್ 2012 ದಿನಾಂಕ: 23.6.2012 ರಂತೆ ಗ್ರಾಮಕರಣಿಕರ ಹುದ್ದೆಗೆ ದೃಷ್ಟಿ ಮಾಂದ್ಯತೆಯನ್ನು ಪರಿಗಣಿಸಲಾಗುವುದಿಲ್ಲ. ಆದ್ದರಿಂದ ಈ ನೇಮಕಾತಿ ಪ್ರಕ್ರಿಯೆಯಲ್ಲಿ ಕುಷ್ಠರೋಗದಿಂದ ಗುಣಮುಖರಾದವರು (Leprosy Cured) , ಮಾನಸಿಕ ಅಸ್ವಸ್ಥರು (Mentally ill) , ಚಲನ ವಲನ ವೈಕಲ್ಯ (Locomotor disability) ಹೊಂದಿರುವವರು, ಶ್ರವಣದೋಷ (Hearing Impaired) ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸಬಹುದಾಗಿರುತ್ತದೆ.

**ಅರ್ಜಿ ಶುಲ್ಕ:**

| | |
|---|---|
| **ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಮಹಿಳಾ ಅಭ್ಯರ್ಥಿಗಳು** | **ರೂ 250.00** |
| **ಸಾಮಾನ್ಯ ವರ್ಗ,2ಎ,2ಬಿ, 3ಎ,3ಬಿ ವರ್ಗಕ್ಕೆ** | **ರೂ 500.00** |

**ಅರ್ಜಿ ಶುಲ್ಕವನ್ನು ವೆಬ್ ಸೈಟ್ ವಿಳಾಸ http://udupi.nic.in ನಲ್ಲಿ ಲಭ್ಯವಾಗುವ ಚಲನ್ನಿನ ಮುದ್ರಿತ ಪ್ರತಿಯನ್ನು ತೆಗೆದುಕೊಂಡು ಸಿಂಡಿಕೇಟ್ ಬ್ಯಾಂಕ್ ಅಥವಾ ಕಾರ್ಪೋರೇಶನ್ ಬ್ಯಾಂಕ್ ನಲ್ಲಿ ಪಾವತಿಸಿ ಸ್ವೀಕೃತಿಯನ್ನು ಪಡೆಯಬೇಕು.**

**ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು:**

1. ಅರ್ಜಿಗಳನ್ನು ಆನ್ ಲೈನ್ ಮೂಲಕ ಮಾತ್ರ ಸಲ್ಲಿಸತಕ್ಕದ್ದು. ಅಂಚೆ ಅಥವಾ ಕೊರಿಯರ್ ಅಥವಾ ಖುದ್ದಾಗಿ ಸ್ವೀಕರಿಸಲಾಗುವುದಿಲ್ಲ.
2. ವಯೋಮಿತಿ:-ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಕೆಳಕಂಡ ವಯೋಮಿತಿ ಹೊಂದಿರತಕ್ಕದ್ದು.

| | ಕನಿಷ್ಠ | ಗರಿಷ್ಠ |
|---|---|---|
| ಪ.ಜಾ/ಪ.ಪಂ/ಪ್ರ-1 | 18ವರ್ಷ | 40ವರ್ಷ |
| 2ಎ,2ಬಿ,3ಎ,3ಬಿ | 18ವರ್ಷ | 38ವರ್ಷ |
| ಸಾಮಾನ್ಯ ವರ್ಗ | 18ವರ್ಷ | 35ವರ್ಷ |

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸುವಷ್ಟರ ಮಟ್ಟಿಗೆ ನಿಗಧಿಪಡಿಸಿದೆ.

ಅ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು/ಅವಳು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೊ ಅಷ್ಟು ವರ್ಷಗಳಿಗೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

ಆ) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು.

ಇ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು.

3. ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.
4. ನಿಗಧಿತ ದಿನಾಂಕದ ನಂತರ ಹಾಕಿದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
5. ಸರ್ಕಾರಿ ಇಲಾಖೆಯ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಆನ್ ಲೈನ್ ನಲ್ಲಿ ಭರ್ತಿ ಮಾಡಿದ ಅರ್ಜಿ ಪ್ರತಿಯನ್ನು ನೇಮಕಾತಿ ಪ್ರಾಧಿಕಾರ/ಇಲಾಖಾ ಮುಖ್ಯಸ್ಥರ ಮುಖಾಂತರ ಅರ್ಜಿಯನ್ನು ಸಲ್ಲಿಸುವುದು.
6. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಪ್ರಚಾರ ಅಥವಾ ಶಿಫಾರಸ್ಸುಗಳನ್ನು ಮಾಡಿದರೆ ಅಂಥವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
7. ಅರ್ಜಿದಾರರೊಡನೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.
8. ಜಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು ಜಾತಿ ಆದಾಯ ಪರಿಶೀಲನಾ ಸಮಿತಿ) ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.
9. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು ಉಡುಪಿ ಜಿಲ್ಲೆ ಇವರು ಕಾಯ್ದಿರಿಸಿಕೊಂಡಿರುತ್ತಾರೆ.
10. ಆಯ್ಕೆಯನ್ನು ಅಭ್ಯರ್ಥಿಯ ಮೆರಿಟ್ ಹಾಗೂ ಮೀಸಲಾತಿ ಆಧಾರದ ಮೇಲೆ ಮಾತ್ರ ಪರಿಗಣಿಸಲಾಗುವುದು.

11. . **ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:-**

ಮೀಸಲಾತಿ ಸೌಲಭ್ಯ ಅಪೇಕ್ಷಿಸುವ ಅಭ್ಯರ್ಥಿಗಳು ಈ ಕೆಳಕಂಡ ಮೂಲ ದಾಖಲೆಗಳನ್ನು ನಿಗದಿತ ನಮೂನೆಯಲ್ಲಿ ಮಾತ್ರಸಂಬಂಧಪಟ್ಟ ರೆವಿನ್ಯೂ ಪ್ರಾಧಿಕಾರದಿಂದ (ಸಂಬಂಧಪಟ್ಟ ತಹಶೀಲ್ದಾರ್ ರಿಂದ) ಪಡೆದು ಪರಿಶೀಲಿಸುವ ದಿನಾಂಕದಂದು ಹಾಜರುಪಡಿಸಬೇಕು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು.

ಪ.ಜಾ/ಪ.ಪಂ. * ನಮೂನೆ-ಡಿಯಲ್ಲಿ, ಪ್ರವರ್ಗ-1: * ನಮೂನೆ-ಇಯಲ್ಲಿ.

ಪ್ರವರ್ಗ 2ಎ,2ಬಿ,3ಎ,3ಬಿ: * ನಮೂನೆ-ಎಫ್ ನಲ್ಲಿ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಚಾಲ್ತಿಯಲ್ಲಿರುವ ಪ್ರಮಾಣ ಪತ್ರವನ್ನು ಪಡೆದಿರಬೇಕು.

12. **ಯೋಜನಾ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು:**

ಯೋಜನೆಗಳಿಂದ ನಿರಾಶ್ರಿತರ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್ ರವರು ನೀಡಿದ ಪ್ರಮಾಣ ಪತ್ರವನ್ನು ಪಡೆದಿರಬೇಕು.

13. **ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು:**

ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸುತ್ತಿರುವಾಗ ಮರಣ ಹೊಂದಿದ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

14. **ಗ್ರಾಮೀಣ ಅಭ್ಯರ್ಥಿ :**

ಗ್ರಾಮೀಣ ಅಭ್ಯರ್ಥಿ ಎಂದರೆ, ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್ .ಎಸ್ .ಎಲ್.ಸಿ ಅಥವಾ ಉನ್ನತ ಪರೀಕ್ಷೆಯಾಗಿದ್ದಲ್ಲಿ 1ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರಿಯಿಂದ ದೃಢೀಕೃತ ಗ್ರಾಮೀಣ ದೃಢೀಕರಣ ಪತ್ರವನ್ನು ಪಡೆದಿರಬೇಕು. ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೈಮು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ರ ಪ್ರಮಾಣ ಪತ್ರವಲ್ಲದೇ ಮೇಲ್ ಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದು ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಠ ಜಾತಿ,ಪರಿಶಿಷ್ಠ ಪಂಗಡ, ಪ್ರವರ್ಗ-1 ಪ್ರವರ್ಗ-2ಎ,2ಬಿ,3ಎ,3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ನಿಗಧಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿರಬೇಕು.

**15. ಕನ್ನಡ ಮಾಧ್ಯಮ ಅಭ್ಯರ್ಥಿಗಳು :**

ಸರ್ಕಾರದ ಅಧಿಸೂಚನೆ ಸಂ: ಡಿಪಿಎಆರ್ 71 ಎಸ್ ಆರ್ ಆರ್ 2001 ದಿ: 24.10.2002 ರಲ್ಲಿ ಹೊರಡಿಸಿರುವ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ (9)(1)(ಸಿ)ರನ್ವಯ ಅಭ್ಯರ್ಥಿಯು 1 ರಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆ ಎನ್ನುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಪ್ರಮಾಣ ಪತ್ರವನ್ನು ಪಡೆದಿರಬೇಕು.

**16. . ಅರ್ಹತಾ ಷರತ್ತುಗಳು :**

- ಅರ್ಜಿದಾರರು ಭಾರತೀಯ ನಾಗರೀಕನಾಗಿರತಕ್ಕದ್ದು.
- ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತವಾಗಿರಬೇಕು.
- .ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಆಯ್ಕೆ ಪ್ರಾಧಿಕಾರ/ರಾಜ್ಯ ಸರ್ಕಾರ ಕಾಯ್ದಿರಿಸಿಕೊಂಡಿದೆ.. ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

**17. . ಕೆಳಕಂಡ ಮೂಲ ದಾಖಲೆಗಳನ್ನು ದಾಖಲಾತಿಗಳ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸಬೇಕು.**

- ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆ ಅಂಕಪಟ್ಟಿ/ಪ್ರಮಾಣ ಪತ್ರ ಮತ್ತು ಕಂಪ್ಯೂಟರ್ ಜ್ಞಾನದ ಬಗ್ಗೆ ದಾಖಲೆ
- ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ವರ್ಗಾವಣೆ ಪ್ರಮಾಣ ಪತ್ರ/ಜನ್ಮ ದಿನಾಂಕವನ್ನು ತೋರಿಸುವ ಶೈಕ್ಷಣಿಕ ಸಂಚಿತ ದಾಖಲೆಯ ಉಧೃತ ಭಾಗ.
- ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
- ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡ,ಪ್ರವರ್ಗ-1 ಪ್ರವರ್ಗ-2ಎ,ಪ್ರವರ್ಗ-2ಬಿ, ಪ್ರವರ್ಗ-3ಎ,3ಬಿ,ಗಳಪ್ರಮಾಣ ಪತ್ರಗಳು( ಮೀಸಲಾತಿ ಕೋರಿದ್ದಲ್ಲಿ)
- ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
- ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ(ಮೀಸಲಾತಿ ಕೋರಿದ್ದಲ್ಲಿ)
- ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ
- Online ನಲ್ಲಿ ಪಡೆದ Acknowledgement slip ಮತ್ತು ಬ್ಯಾಂಕಿಗೆ ಅರ್ಜಿ ಶುಲ್ಕವನ್ನು ಪಾವತಿಸಿದ challan ನ ಕೌಂಟರ್ ಫೈಲ್ ನ ಮೂಲ ಪ್ರತಿಯನ್ನು ಹಾಜರು ಪಡಿಸುವುದು.

➢ ಮೇಲ್ಕಂಡಂತೆ ನಿಗದಿಪಡಿಸಿದ ಎಲ್ಲಾ ದಾಖಲೆಗಳನ್ನು ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಮಾತ್ರ ದಾಖಲಾತಿಗಳ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

**18. . ಇತರೆ ಸೂಚನೆಗಳು:**

1. ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳ ನೇಮಕಾತಿಯನ್ನು ವಜಾಗೊಳಿಸುವುದಲ್ಲದೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
2. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.
3. ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು .ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
4. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ವೆಬ್ ಸೈಟ್ ನಲ್ಲಿ ತಿಳಿಸಿರುವ ಸೂಚನೆಗಳನ್ನು ಪಾಲಿಸುವುದು.
5. ಸರಕಾರದ ಆದೇಶ ಸಂ ಕಂಇ 54 ಬಿಎಸ್ ಸಿ 2007 ದಿನಾಂಕ: 27.3.2007 ರ ಪ್ರಕಾರ ಐದು ವರ್ಷ ಅಂತರ್ ಜಿಲ್ಲಾ ವರ್ಗಾವಣೆಗೆ ಅರ್ಹರಾಗಿರುವುದಿಲ್ಲ. ಆದಾಗ್ಯೂ ಯಾರಾದರೂ ಅಂತರ್ ಜಿಲ್ಲಾ ವರ್ಗಾವಣೆ ಹೊಂದುವುದಾದಲ್ಲಿ ಅಂತಹ ಗ್ರಾಮಕರಣಿಕರಿಗೆ ರೂ. 50000/-(ರೂಪಾಯಿ ಐವತ್ತು ಸಾವಿರ ಮಾತ್ರ ) ದಂಡ ವಿಧಿಸಲಾಗುವುದು.
6. ಅಂತಿಮವಾಗಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶಗಳನ್ನು ನೀಡುವ ಮುನ್ನ ಯಾವುದೇ ಹಂತದಲ್ಲಿ ಯಾವುದೇ ಕಾರಣ/ಮಾಹಿತಿ ನೀಡದೆ, ಈ ನೇಮಕಾತಿ ಪ್ರಕ್ರಿಯೆಯನ್ನು ಮುಂದೂಡುವ ಅಥವಾ ರದ್ದು ಪಡಿಸುವ ಅಥವಾ ವಿಧಿಸಲಾಗಿರುವ ಯಾವುದೇ ಷರತ್ತನ್ನು ಸಡಿಲಗೊಳಿಸುವ ಅಥವಾ ಹೆಚ್ಚುವರಿ ಷರತ್ತನ್ನು ವಿಧಿಸುವ, ತುಂಬಲಾಗುವ ಹುದ್ದೆಗಳ ಸಂಖ್ಯೆಯನ್ನು ಬದಲಾಯಿಸುವ/ನಿರ್ಣಯಿಸುವ ಅಧಿಕಾರವನ್ನು ಜಿಲ್ಲಾಧಿಕಾರಿಗಳು, ಉಡುಪಿ ಜಿಲ್ಲೆರವರು ಕಾಯ್ದಿರಿಸಿಕೊಂಡಿರುತ್ತಾರೆ.
7. ಕರ್ನಾಟಕ ಜನರಲ್ ಸರ್ವೀಸ್ (Revenue Sub-ordinated) (Cadre and Recruitment) (ತಿದ್ದುಪಡಿ) ನಿಯಮಗಳು 2008 ಮತ್ತು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ)ನಿ ಯಮಗಳು 1977 ರ ಪ್ರಕಾರ ಅಭ್ಯರ್ಥಿಯನ್ನು ಅವರು ಪಿಯುಸಿ ಅಥವಾ ಸಿಬಿಎಸ್ ಇ ಅಥವಾ ಐಸಿಎಸ್ ಸಿ ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಅಂಕಗಳ (On merit) ಮತ್ತು ಮೀಸಲಾತಿ ಆಧಾರದ ಮೇಲೆ ಮಾತ್ರ ಆಯ್ಕೆ ಮಾಡಲಾಗುವುದು. ಯಾವುದೇ ಇತರೆ ತತ್ಸಮಾನ ವಿದ್ಯಾರ್ಹತೆ ಅಥವಾ ಮುಕ್ತ ವಿದ್ಯಾಲಯದಿಂದ ನೀಡಲಾದ ಪ್ರಮಾಣಪತ್ರಗಳನ್ನು ಹಾಗೂ ಗಳಿಸಿದ ಅಂಕಗಳನ್ನು ಪರಿಗಣಿಸಲಾಗುವುದಿಲ್ಲ.
8. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆಪಟ್ಟಿಯಲ್ಲಿ ಸೇರ್ಪಡೆಯಾಗಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಹಕ್ಕು ದೊರೆಯುವುದಿಲ್ಲ.

9. ಅಭ್ಯರ್ಥಿಯು ತಾನು ಗ್ರಾಮಕರಣಿಕ ಹುದ್ದೆಯ ನೇಮಕಾತಿ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದ ಎಲ್ಲಾ ಮಾಹಿತಿಗಳನ್ನು ಜಿಲ್ಲಾಧಿಕಾರಿ ಕಛೇರಿ ವೆಬ್ ಸೈಟಿನಿಂದ ಪಡೆಯತಕ್ಕದ್ದು.

10. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಈ ಕೆಳಕಂಡಂತೆ ಸಂಪರ್ಕಿಸತಕ್ಕದ್ದು.

1) ಇ-ಮೇಲ್ :varegudupi2015@gmail.com

R. (signature) 01/08/2015

ಅಧ್ಯಕ್ಷರು,
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ
ಜಿಲ್ಲಾಧಿಕಾರಿಗಳು ಉಡುಪಿ ಜಿಲ್ಲೆ ಉಡುಪಿ

1. ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,ಕಂದಾಯ ಇಲಾಖೆ ಬಹುಮಹಡಿಗಳ ಕಟ್ಟಡ ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
3. ಸಂಕಲನಾಧಿಕಾರಿ, ಸರಕಾರಿ ಹೊರವಲಯ ಮುದ್ರಣಾಲಯ, ಆರ್.ವಿ.ಕಾಲೇಜು, ಅಂಚೆ 8ನೇ ಮೈಲ್ ಮೈಸೂರು ,ರಸ್ತೆ ಕೆಂಗೇರಿ ಬೆಂಗಳೂರು 560059 ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಇವರಿಗೆ ಕಳುಹಿಸುತ್ತಾ ಈ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ 100 ಪ್ರತಿಗಳನ್ನು ಜಿಲ್ಲಾಧಿಕಾರಿಗಳು ಉಡುಪಿ ಜಿಲ್ಲೆ ಇವರಿಗೆ ಒದಗಿಸಲು ಕೋರಿದೆ.
4. ಮಹಾಲೇಖಪಾಲರು(ಎ ಮತ್ತು ಇ) ಕರ್ನಾಟಕ, ಬೆಂಗಳೂರು ಇವರಿಗೆ ಸಲ್ಲಿಸಿದೆ.
5. ಪ್ರಾದೇಶಿಕ ಆಯುಕ್ತರು ಮೈಸೂರು ವಿಭಾಗ, ಮೈಸೂರು ರವರ ಅವಗಾಹನೆಗೆ ಸಲ್ಲಿಸಿದೆ.
6. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಕಳುಹಿಸುತ್ತಾ ,ತಮ್ಮ ಕಾರ್ಯಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
7. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು ಉಡುಪಿ ಜಿಲ್ಲೆ, ಉಡುಪಿ ರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ
8. ಜಿಲ್ಲಾ ಅಧಿಕಾರಿ ಹಿಂದುಳಿದ ವರ್ಗಗಳ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ , ಉಡುಪಿ ಜಿಲ್ಲೆ, ಉಡುಪಿ.
9. ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಉಡುಪಿ ಜಿಲ್ಲೆ, ಉಡುಪಿ.
10. ಉಪವಿಭಾಗಾಧಿಕಾರಿ, ಕುಂದಾಪುರ ಇವರಿಗೆ.
11. ಜಿಲ್ಲೆಯ ಎಲ್ಲಾ ತಹಶೀಲ್ದಾರ್ /ವಿಶೇಷ ತಹಶೀಲ್ದಾರರುಗಳಿಗೆ ಕಳುಹಿಸುತ್ತಾ ತಮ್ಮ ಕಾರ್ಯಲಯದ ಸೂಚನಾಫಲಕದಲ್ಲಿ ಪ್ರಕಟಿಸಲು ಕೋರಿದೆ.
12. ಈ ಕಾರ್ಯಾಲಯದ ಸೂಚನಾ ಫಲಕಕ್ಕೆ.

# ಉಡುಪಿ ಜಿಲ್ಲೆ ಗ್ರಾಮಲೆಕ್ಕಿಗರ ನೇರ ನೇಮಕಾತಿಗೆ ಸಂಬಂಧಿಸಿದಂತೆಕ್ಯಾಲೆಂಡರ್ ಆಫ್ ಇವೆಂಟ್ಸ್

## (Calender of Events)

| ಕ್ರ.ಸಂ | ವಿವರ | ದಿನಾಂಕ |
|---|---|---|
| 1 | ಅರ್ಜಿ ಕರೆಯಲು ನಿಗದಿಪಡಿಸಿದ ದಿನಾಂಕ | 17.08.2015 |
| 2 | ಅಭ್ಯರ್ಥಿಗಳು ಸಲ್ಲಿಸಲು ಕೊನೆಯ ದಿನಾಂಕ | 15.09.2015 |
| 3 | ಜಿಲ್ಲಾಧಿಕಾರಿಗಳು ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ಪ್ರಕಟಿಸ ಬೇಕಾದ ದಿನಾಂಕ | 28.09.2015 |
| 4 | ತಾತ್ಕಾಲಿಕ ಪರಿಶೀಲನಾ ಪಟ್ಟಿಯಂತೆ ಅಭ್ಯರ್ಥಿಗಳು ಮೂಲ ದಾಖಲೆಗಳೊಂದಿಗೆ ಪರಿಶೀಲನೆಗೆ ಜಿಲ್ಲಾಧಿಕಾರಿಗಳ ಕಛೇರಿಗೆ ಹಾಜರಾಗ ಬೇಕಾದ ದಿನಾಂಕ ಮತ್ತು ಸಮಯ | 7.10.2015 |
| 5 | ಜಿಲ್ಲಾಧಿಕಾರಿ ಕಛೇರಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಬೇಕಾದ ದಿನಾಂಕ | 19.10.2015 |
| 6 | ಆಕ್ಷೇಪಣೆಗಳನ್ನು ಸಲ್ಲಿಸಲು ಕೊನೆಯ ದಿನಾಂಕ | 30.10.2015 |
| 7 | ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಬೇಕಾದ ದಿನಾಂಕ | 7.11.2015 |
| | ವೆಬ್ ಸೈಟ್ ವಿಳಾಸ | http://udupi.nic.in |
| 7 | ಸ್ಪಷ್ಟೀಕರಣ/ಮಾಹಿತಿಗಾಗಿ ಸಂಪರ್ಕಿಸಬಹುದಾದ ಇ ಮೈಲ್ ವಿಳಾಸ | varequdupi2015@gmail.com |
| 8 | ದೂರವಾಣಿ ಸಂಖ್ಯೆ | 0820-2574924 |

(ಷರಾ: ಈ ಮೇಲಿನ ಎಲ್ಲಾ ದಿನಾಂಕಗಳು ಅಗತ್ಯವಿದ್ದಲ್ಲಿ ಸಂದರ್ಭಾನುಸಾರ ಬದಲಾವಣೆ ಷರತ್ತಿಗೆ ಒಳಪಟ್ಟಿರುತ್ತದೆ.)

01/08/15

ಅಧ್ಯಕ್ಷರು
ಗ್ರಾಮಲೆಕ್ಕಿಗರ ನೇಮಕಾತಿ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿ, ಉಡುಪಿ.